**Bangalore**
**Regional Kannada**
**03.12.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ರಾಜ್ಯದಲ್ಲಿ ನವೆಂಬರ್ ಅಂತ್ಯದವರೆಗೆ ೧೩ ಸಾವಿರದ ೭೨೨ ಕೋಟಿ ಜಿಎಸ್‌ಟಿ ಸಂಗ್ರಹ - ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಶೇಕಡ ೯೪ರಷ್ಟು ಸಾಧನೆ**

**೨. ಬೆಂಗಳೂರನ್ನು ಭಾರತದ ಆರೋಗ್ಯ ನಗರವನ್ನಾಗಿ ಪರಿವರ್ತಿಸಲು ರಾಜ್ಯ ಸರ್ಕಾರ ಬದ್ಧ - ದಿನೇಶ್ ಗುಂಡೂರಾವ್**

**೩. ಚುನಾವಣಾ ಬಾಂಡ್ ಅಕ್ರಮ ಆರೋಪ ; ನಿರ್ಮಲಾ ಸೀತಾರಾಮನ್, ಜೆ.ಪಿ. ನಡ್ಡಾ ವಿರುದ್ಧದ ಎಫ್‌ಐಆರ್ ರದ್ದುಗೊಳಿಸಿದ ಹೈಕೋರ್ಟ್**

**೪. ರಾಜ್ಯದ ಹಲವೆಡೆ ಧಾರಾಕಾರ ಮಳೆ ; ಕರಾವಳಿಯಲ್ಲಿ ಮೀನುಗಾರರು ತೆರಳದಂತೆ ಜಿಲ್ಲಾಡಳಿತ ಎಚ್ಚರಿಕೆ**

**<><*<><>*><>**

**ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿಂದು ವಾಣಿಜ್ಯ ತೆರಿಗೆ ಇಲಾಖೆ, ಅಬಕಾರಿ ಇಲಾಖೆ, ಮುದ್ರಾಂಕ ಮತ್ತು ನೋಂದಣಿ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು. ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ನವೆಂಬರ್ ಅಂತ್ಯದವರೆಗೆ ೫೩ ಸಾವಿರದ ೧೦೩ ಕೋಟಿ ರೂಪಾಯಿ ತೆರಿಗೆ ಸಂಗ್ರಹ ಮಾಡಲಾಗಿದ್ದು, ಶೇಕಡ ೯೪ ರಷ್ಟು ಸಾಧನೆ ಮಾಡಲಾಗಿದೆ. ರಾಜ್ಯ ಜಿಎಸ್‌ಟಿ ಸಂಗ್ರಹದಲ್ಲಿ ಶೇಕಡ ೧೫ರ ಬೆಳವಣಿಗೆ ದರ ಸಾಧಿಸಿದೆ. ೧೩ ಸಾವಿರದ ೭೨೨ ಕೋಟಿ ಜಿಎಸ್‌ಟಿ ಸಂಗ್ರಹಿಸಲಾಗಿದೆ. ಅಬಕಾರಿ ಇಲಾಖೆಯಲ್ಲಿ ನವೆಂಬರ್ ಅಂತ್ಯದವರೆಗೆ ೨೩ ಸಾವಿರದ ೬೦೦ ಕೋಟಿ ತೆರಿಗೆ ಸಂಗ್ರಹಿಸಲಾಗಿದೆ. ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ೧೫ ಸಾವಿರದ ೧೬೦ ಕೋಟಿ ರಾಜಸ್ವ ಸಂಗ್ರಹಿಸಲಾಗಿದೆ. ಗಣಿ ಮತ್ತು ಭೂವಿಜ್ಞಾನ ಇಲಾಖೆ ನವೆಂಬರ್ ಅಂತ್ಯದವರೆಗೆ ೪ ಸಾವಿರದ ೮೬೨ ಕೋಟಿ ತೆರಿಗೆ ಸಂಗ್ರಹಿಸಿದೆ.**

**<><*<><>*><>**

ಬೆಂಗಳೂರನ್ನು ಭಾರತದ ಮೊದಲ ಆರೋಗ್ಯ ನಗರವನ್ನಾಗಿ ಪರಿವರ್ತಿಸುವ ಆರೋಗ್ಯ ಸಿಟಿಯ ದೃಷ್ಟಿಕೋನ ಬೆಂಬಲಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ “ಆರೋಗ್ಯ ಸಿಟಿ ಸಮ್ಮಿಟ್-೨೦೨೪ ಉದ್ಘಾಟಿಸಿ ಮಾತನಾಡಿದ ಅವರು, ಆರೋಗ್ಯ ನಮ್ಮೆಲ್ಲರ ಮೊದಲ ಪ್ರಾಶಸ್ತ್ಯವಾಗಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಆದರೆ, ಇಂದು ಸಕ್ಕರೆ ಕಾಯಿಲೆ, ಬೊಜ್ಜು, ರಕ್ತದೊತ್ತಡ, ಮಾನಸಿಕ ಒತ್ತಡ ಸೇರಿದಂತೆ ಅನೇಕ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸಮಸ್ಯೆಯಿಂದ ಬಳಲುವವರ ಸಂಖ್ಯೆ ಹೆಚ್ಚಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಬೆಂಗಳೂರು ನಗರವನ್ನು ಆರೋಗ್ಯ ನಗರವನ್ನಾಗಿ ಮಾಡುವ ನಿಟ್ಟಿನಲ್ಲಿ ನಡೆಯುತ್ತಿರುವ ಈ ಪ್ರತಿಜ್ಞೆಯ ಆಂದೋಲನ ಪ್ರಶಂಸನೀಯ, ಇದಕ್ಕೆ ನಮ್ಮ ಸರ್ಕಾರದ ಸಂಪೂರ್ಣ ಬೆಂಬಲವಿದೆ ಎಂದು ತಿಳಿಸಿದ್ದಾರೆ. ಖ್ಯಾತವೈದ್ಯ ಡಾ. ಸುದರ್ಶನ್ ಬಲ್ಲಾಳ್ ಮಾತನಾಡಿ, ಯಾವುದೇ ಕಾಯಿಲೆಗೆ ಚಿಕಿತ್ಸೆ ಪಡೆಯುವುದಕ್ಕಿಂತ ಅದು ಬರುವುದಕ್ಕೂ ಮೊದಲೇ ತಡೆಯುವುದು ಉತ್ತಮ ಎಂದು ಹೇಳಿದ್ದಾರೆ.

<><*<><>*><>

ಚುನಾವಣಾ ಬಾಂಡ್ ಆರೋಪದ ಮೇಲೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಜೆ.ಪಿ. ನಡ್ಡಾ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮತ್ತಿತರರ ವಿರುದ್ಧ ದಾಖಲಾಗಿರುವ ಎಫ್‌ಐಆರ್ ಅನ್ನು ಹೈಕೋರ್ಟ್ ರದ್ದುಪಡಿಸಿದೆ. ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ನಳೀನ್‌ಕುಮಾರ್ ಕಟೀಲ್, ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದೆ. ಮ್ಯಾಜಿಸ್ಟ್ರೇಟ್ ಕೋರ್ಟ್ ಸೂಚನೆ ಮೇರೆಗೆ ಬೆಂಗಳೂರಿನ ತಿಲಕ್‌ನಗರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

<><*<><>*><>

ಭಾರತವು ಎಲ್ಲ ಕ್ಷೇತ್ರಗಳಲ್ಲಿ ಮುಂಚೂಣಿಯ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ನಡೆದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ೧೨ನೇ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪದವಿಯ ನಂತರ ಸಮಗ್ರ ಜ್ಞಾನ ಪಡೆದುಕೊಂಡು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈಯುವ ಮೂಲಕ ಸಾಮಾಜಿಕ, ಆರ್ಥಿಕ, ಶೈಕ್ಷಣಿಕವಾಗಿ ಭಾರತವನ್ನು ಇನ್ನಷ್ಟು ಬಲಿಷ್ಟಗೊಳಿಸಬೇಕು ಎಂದು ಕರೆ ನೀಡಿದ್ದಾರೆ. ಪ್ರದರ್ಶನ ಕಲೆಗಳ ಕ್ಷೇತ್ರದ ಸಾಧನೆಗೆ ಪಂಡಿತ್ ಎಸ್. ಬಾಲೇಶ್ ಭಜಂತ್ರಿ, ಉದ್ಯಮಶೀಲತೆ ಮತ್ತು ಸಾಮಾಜಿಕ ಸೇವಾ ಕ್ಷೇತ್ರಕ್ಕಾಗಿ ಗೋಪಾಲ

ದೇವೇಂದ್ರ ಜಿನಗೌಡ ಹಾಗೂ ನಾಗರಿಕ, ಕ್ರೀಡೆ, ಸೇವಾ ಕ್ಷೇತ್ರದ ಸಾಧನೆಗೆ ಗೋಪಾಲ ಬಿ. ಹೊಸೂರ ಅವರಿಗೆ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು.

<><*<><>*><>

ಮಲ್ಲೇಶ್ವರದ ಜಗನ್ನಾಥ ಭವನದಲ್ಲಿ 'ಸಂಘಟನಾ ಪರ್ವ' ಸಂಬಂಧಿತ ವಿಶೇಷ ಸಭೆ ನಡೆಯುತ್ತಿದೆ. ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕರ್ನಾಟಕದ ಸಹ ಉಸ್ತುವಾರಿ ಸುಧಾಕರ ರೆಡ್ಡಿ, ಕರ್ನಾಟಕದ ಚುನಾವಣಾ ವೀಕ್ಷಕ ಮತ್ತು ಕೇಂದ್ರದ ಮಾಜಿ ಸಚಿವ ರಾಧಾಕೃಷ್ಣನ್, ವಿಪಕ್ಷ ನಾಯಕ ಆರ್.ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನಪರಿಷತ್ ಸದಸ್ಯರಾದ ಸಿ.ಟಿ.ರವಿ, ಸೇರಿದಂತೆ ಹಲವರು ಭಾಗವಹಿಸಿದ್ದಾರೆ. ಸಭೆಗೂ ಮುನ್ನ ಸುದ್ದಿಗಾರೊಂದಿಗೆ ಅವರು, ಈ ಸಭೆಯಲ್ಲಿ ಸದಸ್ಯತ್ವ ಅಭಿಯಾನ, ಸಕ್ರಿಯ ಸದಸ್ಯತ್ವ ಅಭಿಯಾನ, ಬೂತ್ ಮಟ್ಟದ ಸಮಿತಿ ಹಾಗೂ ಮಂಡಲ ಅಧ್ಯಕ್ಷರ ನೇಮಕ ಪ್ರಕ್ರಿಯೆ ನಡೆಯತ್ತದೆ. ಯಾವುದೇ ರೀತಿಯ ರಾಜಕೀಯಕ್ಕೆ ಸಂಬಂಧಿಸಿದಂತೆ ಚರ್ಚೆ ನಡೆಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನದಲ್ಲಿ ರಾಜ್ಯ ಮುಂಚೂಣಿಯಲ್ಲಿದ್ದು, ರಾಜ್ಯದ ಐದು ಪ್ರಮುಖ ನಗರಗಳಲ್ಲಿ ಮಾಹಿತಿ ತಂತ್ರಜ್ಞಾನ ಸೇವೆ ಒದಗಿಸುವ ಕಂಪನಿಗಳಿಗೆ ವಿಶ್ವ ದರ್ಜೆ ಮೂಲಸೌಕರ್ಯ ಹೊಂದಿರುವ ಕಚೇರಿ ಸ್ಥಳಾವಕಾಶ ಅಭಿವೃದ್ಧಿ ಪಡಿಸಲು ಕಿಯೋನಿಕ್ಸ್ ಯೋಜನೆ ರೂಪಿಸಿದೆ ಎಂದು ಕಿಯೋನಿಕ್ಸ ಅಧ್ಯಕ್ಷ ಶಾಸಕ ಶರತ್ ಬಚ್ಚೇಗೌಡ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ದೇವನಹಳ್ಳಿ, ಮೈಸೂರು, ಕಲ್ಬುರ್ಗಿ, ಹುಬ್ಬಳ್ಳಿ, ಮಂಗಳೂರಿನಲ್ಲಿ ಐಟಿ ಪಾರ್ಕ್ ಸ್ಥಾಪನೆಯಾಗಲಿದೆ ಎಂದು ಮಾಹಿತಿ ನೀಡಿದ್ದಾರೆ. ಮಹಾನಗರದ ಹೊರತಾಗಿಯೂ, ಶ್ರೇಣಿ ೨ ಮತ್ತು ಶ್ರೇಣಿ ೩ ನಂತರ ಅಭಿವೃದ್ಧಿ ಹೊಂದುತ್ತಿರುವ ನಗರಗಳ ಬೆಳವಣಿಗೆ ಸೇರಿದಂತೆ ಅಲ್ಲಿನ ಸ್ಥಳೀಯ ಪ್ರತಿಭೆಗಳಿಗೆ ಕೌಶಲಧಾರಿತ ಉದ್ಯೋಗ ಸೃಷ್ಟಿ ಮಾಡಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಫೆಂಗಲ್ ಚಂಡಮಾರುತದ ಹಿನ್ನೆಲೆಯಲ್ಲಿ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಫೆಂಗಲ್ ಚಂಡಮಾರುತದ ಪರಿಣಾಮ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಗಾಳಿ, ಗುಡುಗು ಸಹಿತ ಸತತ ಮಳೆಯಾಗುತ್ತಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ತುಮಕೂರು ಜಿಲ್ಲೆಯಲ್ಲಿ ಮಳೆಯಿಂದಾಗಿ ಜನ-ಜಾನುವಾರು, ಮನೆ ಸೇರಿದಂತೆ ಬೆಳೆ ಹಾನಿ ಸಂಭವಿಸಿದಲ್ಲಿ ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಜಂಟಿ ಸಮೀಕ್ಷೆ ನಡೆಸಿ ಹಾನಿ ಗೊಳಗಾದವರಿಗೆ ಶೀಘ್ರ ಪರಿಹಾರ ನೀಡಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲೆಯಲ್ಲಿ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ರೈತರಿಗೆ ನೋಟಿಸ್ ನೀಡಿರುವ ಪ್ರಕರಣಗಳಿದ್ದಲ್ಲಿ ಕೂಡಲೇ ಗಮನಕ್ಕೆ ತರುವಂತೆ ತಿಳಿಸಿದ್ದಾರೆ. ಕೃಷಿ ಜಂಟಿ ನಿದೇಶಕ ರಮೇಶ್ ಮಾತನಾಡಿ, ಮಳೆಯಿಂದ ಜಿಲ್ಲೆಯಲ್ಲಿ ಈವರೆಗೆ ೧೬೩ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ ಸಂಭವಿಸಿದ್ದು, ೬೬ ರೈತರಿಗೆ ಪರಿಹಾರ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಹವಾಮಾನ ವೈಪರೀತ್ಯ ಸಂಬಂಧ ಮುನ್ನೆಚ್ಚರ ವಹಿಸಿದಲ್ಲಿ ಹಲವು ಅವಘಡಗಳನ್ನು ತಪ್ಪಿಸಬಹುದಾಗಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರವು ಕಾಲ ಕಾಲಕ್ಕೆ ಹೊರಡಿಸುವ ಮಾಹಿತಿಯನ್ನು ಹಂಚಿಕೊಳ್ಳುವಂತೆ ನೈಸರ್ಗಿಕ ವಿಪತ್ತು ಉಸ್ತುವಾರಿ ಕೇಂದ್ರ ನಿರ್ದೇಶಕರಾದ ಹರ್ಷಲ್ ಗೋಯಲ್ ಅಧಿಕಾರಿಗಳಿಗೆ ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಮಾತನಾಡಿದ ಅವರು, ಕೊಡಗು ಜಿಲ್ಲೆಯಲ್ಲಿ ಮುಂಗಾರು ಸಂದರ್ಭದಲ್ಲಿ ಹೆಚ್ಚಿನ ಮಳೆಯಾಗುತ್ತದೆ. ಹಿಂಗಾರು ಸಂದರ್ಭದಲ್ಲಿಯೂ ಸಹ ಅಗತ್ಯ ಮುನ್ನೆಚ್ಚರ ವಹಿಸಬೇಕಿದೆ ಎಂದು ತಿಳಿಸಿದ್ದಾರೆ. ಇಂದು ದಕ್ಷಿಣಕನ್ನಡ, ಉಡುಪಿ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಉತ್ತರಕನ್ನಡ ಜಿಲ್ಲೆಯ ಗದಗ, ಹಾವೇರಿ, ರಾಯಚೂರು, ಯಾದಗಿರಿ, ಧಾರವಾಡದಲ್ಲೂ ಸಾಧಾರಣ ಮಳೆಯಾಗಲಿದೆ. ಕೊಡಗು, ಹಾಸನ, ಶಿವಮೊಗ್ಗ, ಮೈಸೂರು, ಮಂಡ್ಯ ಜಿಲ್ಲೆಗಳಲ್ಲೂ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ. ಗಂಟೆಗೆ ೩೫ ಕಿಲೋಮೀಟರ್ ನಿಂದ ೪೫ ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಹಿನ್ನೆಲೆಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><*<><>*><>

ರಾಜ್ಯಾದ್ಯಂತ ಇಂದು ವಿಶೇಷಚೇತನರ ದಿನಾಚರಣೆ ಆಚರಿಸಲಾಯಿತು. ವಿಶೆಷಚೇತನರಿಗೆ ಅನುಕಂಪ ತೋರಿಸುವುದಕ್ಕಿಂತ ಮುಖ್ಯವಾಗಿ ನಾವು ಅವಕಾಶ ಕಲ್ಪಿಸಿಕೊಡಬೇಕು ಎಂದು ಚಿತ್ರದುರ್ಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಎಲ್ಲಾ ಕ್ಷೇತ್ರಗಳಲ್ಲಿ ಆತ್ಮಸ್ಥೈರ್ಯದಿಂದ ಪಾಲ್ಗೊಂಡು ನೂರಕ್ಕೆ ನೂರರಷ್ಟು ಸಾಧನೆ ಮಾಡಿ ಎಂದು ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್ ದಿವಾಕರ್ ವಿಶೇಷಚೇತನರಿಗೆ ಕರೆ ನೀಡಿದ್ದಾರೆ. ವಿಶೇಷಚೇತನರಲ್ಲಿಯೂ ವಿಶೇಷ ಪ್ರತಿಭೆ ಹಾಗೂ ಜ್ಞಾನವಿದ್ದು, ಅದನ್ನು ಗುರುತಿಸಿ, ಬೆಳೆಸುವ ಜೊತೆಗೆ ಪ್ರತಿಯೊಬ್ಬ ವಿಶೇಷಚೇತನರನ್ನು ಗೌರವ-ಪ್ರೀತಿಯಿಂದ ಕಾಣುವ ಕೆಲಸ ಆಗಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಮೂರ್ತಿ ಭೋಲಾ ಪಂಡಿತ್ ಅಭಿಪ್ರಾಯಪಟ್ಟಿದ್ದಾರೆ. ಸಮಾಜದಲ್ಲಿ ವಿಶೇಷಚೇತನರನ್ನು ಕೀಳಾಗಿ ಕಾಣದೆ, ಅವರನ್ನು ಮುಂದೆ ತರಲು ಎಲ್ಲರೂ ಪ್ರಯತ್ನಿಸಬೇಕು ಎಂದು ಕೋಲಾರ ಅಪರ ಜಿಲ್ಲಾಧಿಕಾರಿ ಮಂಗಳ ತಿಳಿಸಿದ್ದಾರೆ. ಧಾರವಾಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಇಲಾಖೆ ಸಂಯುಕ್ತಾಶ್ರಯದಲ್ಲಿ ಹುಬ್ಬಳ್ಳಿಯ ಇಂದಿರಾ ಗಾಜಿನ ಮನೆಯಲ್ಲಿ ವಿಶ್ವ ವಿಶೇಷಚೇತನರ ದಿನಾಚರಣೆ ಕಾರ್ಯಕ್ರಮ ನಡೆಯಿತು. ವಿಶೇಷಚೇತನರಲ್ಲಿ ನಾಯಕತ್ವ ಗುಣವನ್ನು ಬೆಳೆಸುವುದರ ಜೊತೆಗೆ ಆತ್ಮಸ್ಥೈರ್ಯ ಮೂಡಿಸುವುದು ವಿಶ್ವ ವಿಶೇಷಚೇತನರ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕ ಇಕ್ಬಾಲ್ ಹುಸೇನ್ ಅಭಿಪ್ರಾಯಪಟ್ಟಿದ್ದಾರೆ. ಸಮಾಜದಲ್ಲಿ ವಿಶೇಷಚೇತನರು ಅಶಕ್ತರು ಎಂಬ ಕೀಳರಿಮೆಯಿಂದ ನೋಡಬಾರದು ಎಂದು ಯಾದಗಿರಿ ಮತಕ್ಷೇತ್ರದ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ್ ತಿಳಿಸಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ ಭೇಟಿ ವೇಳೆ ಲೋಕಾಯುಕ್ತಕ್ಕೆ ಒಟ್ಟು ೧೯೩ ದೂರುಗಳು ಸಲ್ಲಿಕೆಯಾಗಿದ್ದು, ೮೧ ದೂರುಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕರ ಅಹವಾಲು ಆಲಿಕೆ ವೇಳೆ ಕೆಲವು ಪ್ರಕರಣಗಳನ್ನು ಸ್ಥಳದಲ್ಲೇ ವಿಲೇವಾರಿ ಮಾಡಲಾಗಿದೆ. ದಾಖಲಾಗುವ ಪ್ರಕರಣಗಳನ್ನು ಆದಷ್ಟು ಶೀಘ್ರ ಇತ್ಯರ್ಥಪಡಿಸಲು ಆದ್ಯತೆ ನೀಡಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ವಕೀಲ ವೃತ್ತಿಯ ಘನತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಯುವಪೀಳಿಗೆಯ ವಕೀಲರಿಗೆ ಹಿರಿಯ ವಕೀಲರು ಮಾರ್ಗದರ್ಶಿಗಳಾಗಬೇಕೆಂದು ಮುಖ್ಯ ಮಂತ್ರಿಗಳ ಕಾನೂನು ಸಲಹೆಗಾರ ವೀರಾಜಪೇಟೆ ಕ್ಷೇತ್ರ ಶಾಸಕ ಎ.ಎಸ್ ಪೊನ್ನಣ್ಣ ಕರೆ ನೀಡಿದ್ದಾರೆ. ಮಡಿಕೇರಿ ವಕೀಲರ ಸಂಘದ ವತಿಯಿಂದ ನಡೆದ ವಕೀಲರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದ ಇತಿಹಾಸದಲ್ಲಿ ವಕೀಲರ ಸೇವೆ ಸದಾ ಸ್ಮರಣೀಯವಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**